# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 38 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 04-12-2023 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ವಿದ್ಯುತ್ ಪೂರೈಕೆಯಲ್ಲಿ ಪ್ರತಿನಿತ್ಯ ತೀವ್ರವಾಗಿ ವ್ಯತ್ಯಯವಾಗುತ್ತಿರುವುದರಿಂದ ರೈತರು ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಪ್ರಸ್ತುತ ರೈತರ ಕೃಷಿ ಪಂಪ್ ಸೆಟ್ ಗಳಿಗೆ ಸರ್ಕಾರದ ಆದೇಶದಂತೆ ದಿನವಹಿ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ.<br>ಅನಿವಾರ್ಯ ಸಂದರ್ಭಗಳಲ್ಲಿ ವಿದ್ಯುತ್ ಲಭ್ಯತೆ /ಉತ್ಪಾದನೆ ಕುಂಠಿತವಾದಾಗ ಅಥವಾ ವಿದ್ಯುತ್ ಜಾಲದಲ್ಲಿ ಅಡಚಣೆ ಉಂಟಾದಾಗ ಮಾತ್ರ ತಾತ್ಕಾಲಿಕವಾಗಿ ವಿದ್ಯುತ್ ಜಾಲದ ಸುರಕ್ಷತಾ ದೃಷ್ಟಿಯಿಂದ ಅಲ್ಪ ಪ್ರಮಾಣದಲ್ಲಿ ವಿದ್ಯುತ್ ಕಡಿತ ಮಾಡಲಾಗುತ್ತದೆ. ಈ ಬಾರಿಯ ಮುಂಗಾರು ವೈಫಲ್ಯದಿಂದಾಗಿ ಅಕ್ಟೋಬರ್ 23 ರ ಮಾಹೆಯಲ್ಲಿ ಮಾತ್ರ ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/ವಿಎಸ್‌ಸಿ/ 283/2023 ದಿನಾಂಕ: 16-10-2023 ರಂತೆ ರಾಜ್ಯದ ಕೃಷಿ ಪಂಪ್‌ಸೆಟ್‌ಗಳಿಗೆ 3 ಫೇಸ್ ವಿದ್ಯುತ್ ಸರಬರಾಜು ಸಮಯವನ್ನು 7 ಗಂಟೆಗಳಿಂದ 5 ಗಂಟೆಗಳಿಗೆ ಕಡಿಮೆ ಮಾಡಿ, ವಿದ್ಯುತ್ ಹೊರೆಗನುಗುಣವಾಗಿ ಹಗಲು ಮತ್ತು ರಾತ್ರಿ ಬ್ಯಾಚ್‌ಗಳಲ್ಲಿ 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗಿರುತ್ತದೆ. ಪರಿಣಾಮಕಾರಿಯಾಗಿ ಎಲ್ಲಾ ಜಿಲ್ಲೆಗಳಲ್ಲಿಯೂ ಮೇಲ್ವಿಚಾರಣೆ ನಡೆಸಲಾಗಿದೆ. ಭತ್ತ ಮತ್ತು ಕಬ್ಬಿನ ಬೆಳೆಗಳಿಗೆ ಮಾತ್ರ 7 ಗಂಟೆಗಳ ವಿದ್ಯುತ್ತನ್ನು ದಿನವಹಿ ನೀಡಲಾಗಿದೆ.<br>ದಿನಾಂಕ 07.11.2023 ರಿಂದ ರಾಜ್ಯದ ಎಲ್ಲಾ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಸರ್ಕಾರದ ಆದೇಶದಂತೆ ಪ್ರತಿ ದಿನ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್‌ನ್ನು ಸರಬರಾಜು ಮಾಡಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಪ್ರಸ್ತುತ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಪ್ರತಿನಿತ್ಯ ಎಷ್ಟು ಗಂಟೆಗಳ ನಿರಂತರ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ; | ಹೆಚ್ಚಿನ ಕೃಷಿ ಫೀಡರ್‌ಗಳಿಗೆ ದಿನವಹಿ ಹಗಲಿನ ವೇಳೆಯಲ್ಲಿ ನಿರಂತರ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ ಸರಬರಾಜು ಪೂರೈಸಲಾಗುತ್ತಿದೆ.<br>ತಾಂತ್ರಿಕ ಸಾಧ್ಯತೆ ಇಲ್ಲದಿರುವ ಕೃಷಿ ಫೀಡರ್‌ಗಳಿಗೆ ಮಾತ್ರ ಹಗಲು ಹಾಗೂ ರಾತ್ರಿ ವೇಳೆಯ ಬ್ಯಾಚ್‌ಗಳಲ್ಲಿ ಒಟ್ಟು 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. |
| ಇ) | ಕಳೆದ 3 ವರ್ಷಗಳಲ್ಲಿ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಪ್ರತಿನಿತ್ಯ ಎಷ್ಟು ಗಂಟೆಗಳ ವಿದ್ಯುತ್ ಪೂರೈಕೆ ಮಾಡಲಾಗಿದೆ; (ವಿವರ ನೀಡುವುದು) | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ರೈತರ ಕೃಷಿ ಪಂಪ್ ಸೆಟ್ ಗಳಿಗೆ ಸರ್ಕಾರದ ಆದೇಶದಂತೆ ದಿನವಹಿ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ ಪೂರೈಕೆ ಮಾಡಲಾಗಿದೆ. |

| | | |
|---|---|---|
| ಈ) | ವಿದ್ಯುತ್ ಪೂರೈಕೆಯಲ್ಲಿ ಪ್ರತಿನಿತ್ಯ ತೀವ್ರವಾಗಿ ವ್ಯತ್ಯಯವಾಗುತ್ತಿರುವುದರಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಕನಿಷ್ಟ 7 ಗಂಟೆಯಾದರೂ ನಿರಂತರವಾಗಿ ವಿದ್ಯುತ್ ಪೂರೈಸಲು ಸರ್ಕಾರ ಈ ಕೂಡಲೇ ಏನು ಕ್ರಮ ವಹಿಸಲಿದೆ? | ಪ್ರಸ್ತುತ ರಾಜ್ಯದಲ್ಲಿ ರೈತರ ಕೃಷಿ ಪಂಪ್ ಸೆಟ್ ಗಳಿಗೆ ದಿನವಹಿ 7 ಗಂಟೆಗಳ ಕಾಲ 3-ಫೇಸ್ ವಿದ್ಯುತ್ತನ್ನು ಪೂರೈಸಲಾಗುತ್ತಿದೆ.<br><br>ಮುಂದುವರೆದು ಕೃಷಿ ಫೀಡರ್‌ಗಳಿಗೆ ಹಗಲಿನ ವೇಳೆ 3-ಫೇಸ್ ವಿದ್ಯುತ್ ಸರಬರಾಜು ವ್ಯವಸ್ಥೆ ಮಾಡಲು ಶಾಶ್ವತ ಪರಿಹಾರವನ್ನು ಕಂಡುಹಿಡಿಯಲು ಈ ಕೆಳಗಿನ ಯೋಜನೆಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>1) KUSUM-C ಮೂಲಕ ಕೃಷಿ ಫೀಡರ್‌ಗಳ ಸೌರೀಕರಣ.<br>2) KUSUM-B ಮೂಲಕ ಕೃಷಿ ಸ್ಥಾವರಗಳ ಸೌರೀಕರಣ. |

ಸಂಖ್ಯೆ: ಎನರ್ಜಿ 277 ಇಬಿಎಸ್ 2023

(ಕೆ.ಜೆ.ಜಾರ್ಜ್) 1/12/23
ಇಂಧನ ಸಚಿವರು